ಅ) ಹಾಗಿದ್ದಲ್ಲಿ ಇಲ್ಲಿಯವರೆಗೆ ಈ ಕಾಮಗಾರಿಯನ್ನು ಕೈಗೊಳ್ಳಲದೇ ಇರಲು ಕಾರಣಗಳೇನು?

ಇ) ಇದಕ್ಕಾಗಿ ಖರ್ಚಾಗಿರುವ ಹಣವೆಷ್ಟು?

ಈ) ಈ ಕಾಮಗಾರಿಯನ್ನು ಕೂಡಲೇ ಕೈಗೊಳ್ಳುವ ಸರ್ಕಾರ ಸಂಬಂಧಪಟ್ಟವರಿಗೆ ಆದೇಶಿಸುತ್ತದೆಯೇ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು):

ಅ) ಹೌದು.

ಆ) ಡಾಂಬರು ಮೇಲ್ಪೈ ದುರಸ್ತಿ ಮಾಡಲಾಗಿದ್ದು, ವಾಹನಗಳು ತೊಂದರೆ ಇಲ್ಲದೆ ಸಂಚರಿಸುತ್ತಿವೆ.

ಇ) ರೂ. 40.00 ಲಕ್ಷಗಳು

ಈ) ಡಾಂಬರು ಮೇಲ್ಪೈ ತೃಪ್ತಿಕರ ಸ್ಥಿತಿಯಲ್ಲಿರುವುದರಿಂದ, ಈ ಬಗ್ಗೆ ಇನ್ನೂ ಕೆಲವು ತಿಂಗಳ ನಂತರ ಕ್ರಮ ತೆಗೆದುಕೊಳ್ಳಲಾಗುವುದು.

ಬೆಂಗಳೂರಿನ ಕ್ವೀನ್ಸ್ ರಸ್ತೆ ಹಾಗೂ ವಿಷನ್ ರಸ್ತೆಗಳಲ್ಲಿ ಏಕಮುಖ ಸಂಚಾರಕ್ಕೆ ವ್ಯವಸ್ಥೆ ಮಾಡಿರುವುದರಿಂದ ಸಾರ್ವಜನಿಕರಿಗೆ ತೊಂದರೆ

2078 (2235) - ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ): ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ಕ್ವೀನ್ಸ್ ರಸ್ತೆ ಹಾಗೂ ಮಿಷನ್ ರಸ್ತೆಗಳಲ್ಲಿ ಏಕಮುಖ ಸಂಚಾರಕ್ಕೆ ವ್ಯವಸ್ಥೆ ಮಾಡಿರುವುದರಿಂದ ಸಾರ್ವಜನಿಕರಿಗೆ ತೊಂದರೆಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಕ್ವೀನ್ಸ್ ರಸ್ತೆಯಿಂದ ಶಿವಾಜಿನಗರಕ್ಕೆ ಹೋಗಿ ವಿಧಾನಸೌಧ ಕಡೆಗೆ ವಾಹನಗಳು ಸಂಚರಿಸಬೇಕಾಗಿರುವುದರಿಂದ, ಈ ರಸ್ತೆಗಳಲ್ಲಿ ವಾಹನಗಳ ಒತ್ತಡ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಈ ರಸ್ತೆಗಳಲ್ಲಿನ ಏಕಮುಖ ಸಂಚಾರ ವ್ಯವಸ್ಥೆಯನ್ನು ರದ್ದುಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು):

ಅ) ಇಲ್ಲ.

ಆ) ಸಂಚಾರ ತಜ್ಞರಿಂದ ಏಕಮುಖ ಸಂಚಾರ ವ್ಯವಸ್ಥೆ ಬಗ್ಗೆ ಕೂಲಂಕುಷವಾಗಿ ಅಭ್ಯಾಸ ನಡೆಸಿ, ತಜ್ಞರ ಅಭಿಪ್ರಾಯದ ಮೇರೆಗೆ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಏಕಮುಖ ಸಂಚಾರ ವ್ಯವಸ್ಥೆ ಏರ್ಪಡಿಸಲಾಗಿರುತ್ತದೆ. ಇದರಿಂದ ಆ ರಸ್ತೆಗಳಲ್ಲಿ ವಾಹನಗಳ ಒತ್ತಡ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಇ) ಸಾರ್ವಜನಿಕರ ಹಿತದೃಷ್ಟಿ ಮತ್ತು ಅಪಘಾತಗಳನ್ನು ತಪ್ಪಿಸುವ ದೃಷ್ಟಿಯಿಂದ ಹಾಗೂ ಸುಗಮ ಸಂಚಾರ ವ್ಯವಸ್ಥೆಯನ್ನು ಏರ್ಪಡಿಸುವ ಸಲುವಾಗಿ ಏಕಮುಖ ಸಂಚಾರ ವ್ಯವಸ್ಥೆಯನ್ನು ಜಾರಿಗೆ ತಂದಿದ್ದು, ಅದನ್ನು ರದ್ದುಗೊಳಿಸುವ ಪ್ರಸ್ತಾವನೆ ಇರುವುದಿಲ್ಲ.